ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1037(1163)
ಸದಸ್ಯರ ಹೆಸರು : ಶ್ರೀಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 23-12-2021
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ.	ವಿಷಯ	ಉತ್ತರ
ಅ)	ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮೆಟ್ರೋ ಕಾಮಗಾರಿಗಳು ತೀರಾ ಮಂದಗತಿಯಲ್ಲಿ ಸಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೆಂಗಳೂರು ಮೆಟ್ರೋ ರೈಲು ಯೋಜನೆ ಹಂತ-2 ಹಾಗೂ 2ಎ & 2ಬಿ ಪ್ರಗತಿಯಲ್ಲಿದೆ. ಪ್ರಾರಂಭದಲ್ಲಿ ಮೆಟ್ರೋ ರೈಲು ಯೋಜನೆ ಹಂತ-2ಕ್ಕೆ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಮರಗಳನ್ನು ತೆರವುಗೊಳಿಸುವ ಸಲುವಾಗಿ ಹಾಗೂ ಕೋವಿಡ್-19 ಸಾಂಕ್ರಾಮಿಕ ರೋಗದ ಕಾರಣ ಕಾಮಗಾರಿಗಳು ಮಂದಗತಿಯಲ್ಲಿ ಸಾಗಿದ್ದವು. ಪ್ರಸ್ತುತ ಹಂತ-2ರಲ್ಲಿ 75.06 ಕಿ.ಮೀ.ಗಳ ಉದ್ದದ ಪೈಕಿ ಈಗಾಗಲೇ 13.65 ಕಿ.ಮೀ ಮಾರ್ಗವನ್ನು ಸಾರ್ವಜನಿಕ ಸೇವೆಗೆ ಅನುವು ಮಾಡಿ ಕೊಡಲಾಗಿರುತ್ತದೆ. 2022ರ ವೇಳೆಗೆ 32.6 ಕಿ.ಮೀ.ಗಳನ್ನು ಮುಕ್ತಾಯಗೊಳಿಸಲು ಯೋಜಿಸ ಲಾಗಿದ್ದು, ಬಾಕಿ ಉಳಿದ 25.81 ಕಿ.ಮೀ.ಗಳನ್ನು ಮಾರ್ಚ್-2025ರ ವೇಳೆಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ.
ಆ)	ಹಾಗಿದ್ದಲ್ಲಿ, ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮೆಟ್ರೋ ಕಾಮಗಾರಿಗಳು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಬೆಂಗಳೂರು ಮೆಟ್ರೋ ರೈಲು ಯೋಜನೆಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಪ್ರಗತಿಯ ಪರಿಶೀಲನೆಯನ್ನು ಮಾಡಲಾಗುತ್ತಿದ್ದು, ಅಂತರ್ ಇಲಾಖೆಗಳ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ನಿಗಮದ ಹಿರಿಯ ಅಧಿಕಾರಿಗಳು ಮೇಲಿಂದ ಮೇಲೆ ಪ್ರಗತಿಯನ್ನು ಪರಿಶೀಲಿಸಿ, ಕಾಮಗಾರಿಗಳನ್ನು ಸಕಾಲಕ್ಕೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.
ಇ)	ಬೆಂಗಳೂರಿನ ನಾಗಸಂದ್ರ-ಬಿಐಇಸಿ (ಬೆಂಗಳೂರು ಅಂತರ ರಾಷ್ಟ್ರೀಯ ಎಕ್ಸಿಬಿಷನ್ ಸೆಂಟರ್) ನಡುವಿನ ನಮ್ಮ ಮೆಟ್ರೋ ಕಾಮಗಾರಿ ತೀರಾ ವಿಳಂಬವಾಗುತ್ತಿರಲು ಕಾರಣಗಳೇನು; ಇದನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಮೆಟ್ರೋ ಸೇವೆಯನ್ನು ಒದಗಿಸಲಾಗುವುದು;	ಬೆಂಗಳೂರು ಮೆಟ್ರೋ ರೈಲು ಯೋಜನೆ ರೀಚ್-3ರ ವಿಸ್ತರಣೆ ನಾಗಸಂದ್ರದಿಂದ ಬೆಂಗಳೂರು ಅಂತರರಾಷ್ಟ್ರೀಯ ಎಕ್ಸಿಬಿಷನ್ ಸೆಂಟರ್‌ವರೆಗಿನ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. ಪ್ರಾರಂಭದಲ್ಲಿ ಕಾಮಗಾರಿಯು ವಿಳಂಬವಾಗಿರುವುದಕ್ಕೆ ನೈಸ್ ರಸ್ತೆಯ ವರು ಮೆಟ್ರೋ ಕಾಮಗಾರಿಗೆ ಬೇಕಾದ ಭೂಸ್ವಾಧೀನ ನೀಡುವುದಕ್ಕೆ ಅಡ್ಡಿಪಡಿಸಿರುತ್ತಾರೆ ಹಾಗೂ ಅಂಚೆಪಾಳ್ಯದ ಗ್ರಾಮಸ್ಥರು ಮೆಟ್ರೋ ನಿಲ್ದಾಣ ಬೇಕೆಂಬ ಬೇಡಿಕೆಯಿಂದಾಗಿ ನಿರ್ಮಾಣಕ್ಕೆ ಅಡಚಣೆ ಒಡ್ಡಿದ್ದರಿಂದಲೂ ವಿಳಂಬವಾಗಿರುತ್ತದೆ. ಸದರಿ ಕಾಮಗಾರಿಯನ್ನು ಡಿಸೆಂಬರ್-2022ರ ವೇಳೆಗೆ ಪೂರ್ಣಗೊಳಿಸಲಾಗುವುದು.

ಈ)	ಸದರಿ ಮೆಟ್ರೋ ಸೇವೆಯು ನೆಲಮಂಗಲದವರೆಗೆ ವಿಸ್ತರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇದು ಯಾವಗ ಸಾಕಾರಗೊಳ್ಳುವುದು ?	ಬೆಂಗಳೂರು ಮೆಟ್ರೋ ರೈಲು ಯೋಜನೆ ರೀಚ್-3ನ್ನು ನೆಲಮಂಗಲದವರೆಗೆ ವಿಸ್ತರಿಸುವ ಪ್ರಸ್ತಾವನೆಯು ಸಿಎಂಪಿ (CMP) 2031ರ ಯೋಜನೆಯಲ್ಲಿ ಒಳಗೊಂಡಿರದ ಕಾರಣ ಪ್ರಸ್ತುತ ನೆಲಮಂಗಲಕ್ಕೆ ಮೆಟ್ರೋ ವಿಸ್ತರಣೆ ಯೋಜನೆಯು ಇರುವುದಿಲ್ಲ.

ಕಡತ ಸಂಖ್ಯೆ ನಅಇ 248 ಪಿ.ಆರ್.ಜೆ. 2021

(ಬಸವರಾಜ ಬೊಮ್ಮಾಯಿ)
ಮುಖ್ಯ ಮಂತ್ರಿಗಳು